# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1012(1087)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್. ಪ್ರಸನ್ನ ಕುಮಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ ಉಪಧ್ಯಾಯರ ಕೊರತೆ ಬಗ್ಗೆ

(ಅ) ರಾಜ್ಯದಲ್ಲಿ ಬಹಳಷ್ಟು ಪ್ರಾಥಮಿಕ ಶಾಲೆಗಳಲ್ಲಿ ಅದರಲ್ಲೂ, ಗ್ರಾಮೀಣ ಪ್ರದೇಶದಲ್ಲಿ ಏಕೋಪಾದ್ಯಾಯ ಶಾಲೆಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು;

(ಆ) ರಾಜ್ಯದಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗೆ ಅತಿಥಿ ಶಿಕ್ಷಕರನ್ನು ನೇಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ರಾಜ್ಯದಲ್ಲಿ ಖಾಲಿಯಿರುವ ಒಟ್ಟು ಶಿಕ್ಷಕರ ಹುದ್ದೆ ಎಷ್ಟು; (ಮಾಹಿತಿ ನೀಡುವುದು)

(ಈ) ಅನುದಾನ ಪಡೆದ ಖಾಸಗಿ ಶಾಲೆಯಲ್ಲಿ ಮಕ್ಕಳ ಕೊರತೆಯಿಂದ ಹೆಚ್ಚುವರಿ ಶಿಕ್ಷಕರನ್ನು ವರ್ಗಾವಣೆ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಸರ್ಕಾರ ಇದಕ್ಕಾಗಿ ಕಾನೂನು ರೂಪಿಸಿದೆಯೇ; (ವಿವರ ನೀಡುವುದು)

(ಉ) ಶಿವಮೊಗ್ಗ ಜಿಲ್ಲೆಯಲ್ಲಿರುವ ಒಟ್ಟು ಶಾಲೆಗಳ ಸಂಖ್ಯೆ ಎಷ್ಟು ಹಾಗೂ ಸರ್ಕಾರಿ ಪ್ರಾಥಮಿಕ ಶಾಲೆ, ಸರ್ಕಾರಿ ಪ್ರೌಢ ಶಾಲೆ, ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುವ ಶಿಕ್ಷಕರ ಸಂಖ್ಯೆ ಎಷ್ಟು; ಮಂಜೂರಾದ ಹುದ್ದೆಗಳು ಎಷ್ಟು; ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು?